# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 727

2) ಸದಸ್ಯರ ಹೆಸರು : ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು)

3) ಉತ್ತರಿಸಬೇಕಾದ ದಿನಾಂಕ : 12-03-2025

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀನುಗಾರಿಕೆ ಉದ್ಯೋಗ ಕೈಗೊಳ್ಳಲು ಇರುವ ಸರ್ಕಾರದ ಯೋಜನೆಗಳು ಯಾವುವು; ಮತ್ತು ಇವರಿಗೆ ಮೀನುಗಾರಿಕೆ ಉದ್ಯೋಗ ಕೈಗೊಳ್ಳಲು ಇರುವ ಸಾಲದ ಯೋಜನೆಗಳಾವುವು?<br>(ಸಬ್ಸಿಡಿ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | ಇಲಾಖೆಯ ವಿವಿಧ ಕಾರ್ಯಕ್ರಮಗಳಲ್ಲಿ ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀನುಗಾರರಿಗೆಂದೇ **ಅನುಬಂಧ-1** ರಲ್ಲಿರುವಂತೆ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>ಪ್ರಸ್ತುತ, 2024-25 ನೇ ಸಾಲಿನಲ್ಲಿ ಇಲಾಖೆಯಲ್ಲಿ **ಅನುಬಂಧ-2** ರಲ್ಲಿರುವಂತೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಯೋಜನೆಗಳನ್ನು ಪ್ರಯೋಜನವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳು ಸಹ ಪಡೆಯಬಹುದಾಗಿದೆ.<br><br>2022-23ನೇ ಸಾಲಿನಿಂದ 100 ಹೆ. ವರೆಗಿನ ಜಲವಿಸ್ತೀರ್ಣದ ಒಳನಾಡು ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಇ-ಟೆಂಡರ್‌ನಲ್ಲಿ ಪಡೆಯಲು ಪರಿಶಿಷ್ಟ ಜಾತಿ (17.15%) ಹಾಗೂ ಪರಿಶಿಷ್ಟ ಪಂಗಡದ (6.95%) ಫಲಾನುಭವಿಗಳಿಗೆ ಮೀಸಲಾತಿಯನ್ನು ಕಲ್ಪಿಸಲಾಗಿದೆ.<br><br>ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮೀನುಗಾರರಿಗೆ 50,000 ರೂ.ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಮಹಿಳೆಯರಿಗೆ ಶೂನ್ಯ ಬಡ್ಡಿ ದರದಲ್ಲಿ ನೀಡಲು ಅವಕಾಶ ಕಲ್ಪಿಸಲಾಗಿದೆ. 2023-24ನೇ ಸಾಲಿನಿಂದ ಸದರಿ ಯೋಜನೆಯಡಿ ಸಾಲದ ಮಿತಿಯನ್ನು ರೂ.50,000/-ಗಳಿಂದ ರೂ.3,00,000/- ಗಳವರೆಗೆ ಹೆಚ್ಚಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. |

ಸಂಖ್ಯೆ: ಪಸಂಮೀ ಇ-60 ಮೀಇಯೋ 2025

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: ೭೨೭ ರ

ಅನುಬಂಧ-01

2024-25 ನೇ ಸಾಲಿನ ವಿಶೇಷ ಘಟಕ ಯೋಜನೆಗಳ ವಿವ..

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆ ಮತ್ತು ಲೆಕ್ಕ ಶೀರ್ಷಿಕೆ | ಆಯವ್ಯಯ SCSP ಹಂಚಿಕೆ | ಆಯವ್ಯಯ TSP ಹಂಚಿಕೆ | ಆಯವ್ಯಯ ಒಟ್ಟು | ಪರಿಷ್ಕೃತ ಆಯವ್ಯಯ SCSP ಹಂಚಿಕೆ | ಪರಿಷ್ಕೃತ ಆಯವ್ಯಯ TSP ಹಂಚಿಕೆ | ಪರಿಷ್ಕೃತ ಆಯವ್ಯಯ ಒಟ್ಟು | ಯೋಜನೆಯ ಸಂಕ್ಷಿಪ್ತ ಮಾಹಿತಿ (ಸಬ್ಸಿಡಿ/ಸಾಲ ಇತ್ಯಾದಿ ಮಾಹಿತಿ ಸೇರಿದಂತೆ) |
|---|---|---|---|---|---|---|---|---|
| 1 | ನೀಲಿಕ್ರಾಂತಿ/ಮೀನುಗಾರಿಕೆಯ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (Central Share) | 501.00 | 200.00 | 701.00 | 1000.00 | 1000.00 | 2000.00 | ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಬರುವ ವಿವಿಧ ಉಪಯೋಜನೆಗಳಡಿ ಘಟಕ ವೆಚ್ಚದ ಶೇ.60 ರಷ್ಟು ಸಹಾಯಧನವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀನುಗಾರರಿಗೆ ನೀಡಲಾಗುವುದು. |
| | ನೀಲಿಕ್ರಾಂತಿ/ಮೀನುಗಾರಿಕೆಯ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (State Share ) | 333.00 | 133.00 | 466.00 | 667.00 | 667.00 | 1334.00 | |
| 3 | ಸಾಂಪ್ರದಾಯಿಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು | 87.00 | 0.00 | 87.00 | 87.00 | 0.00 | 87.00 | ಸದರಿ ಯೋಜನೆಯಡಿ ಕರಾವಳಿ ಜಿಲ್ಲೆಗಳಲ್ಲಿನ ಮೋಟರೀಕೃತ ನಾಡದೋಣಿಗಳಿಗೆ ಮಾಸಿಕವಾಗಿ ತಲಾ 300 ಲೀ ನಂತೆ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಮೂಲಕ ಪರಿಶಿಷ್ಟ ಜಾತಿ ಮೀನುಗಾರರಿಗೆ ಸಬ್ಸಿಡೈಸಡ್ ದರದಲ್ಲಿ ಸೀಮೆಎಣ್ಣೆ ವಿತರಣೆ ಮಾಡುವುದು. |
| 4 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತ/Unspent SCSP-TSP Amount as per the SCP-TSP Act 2013 | 11.36 | 0.02 | 11.38 | 11.36 | 0.02 | 11.38 | ಕರಾವಳಿ ಭಾಗದ ಪರಿಶಿಷ್ಟ ಜಾತಿ ಫಲಾನುಭವಿಗಳಿಗೆ ಎಫ್.ಆರ್.ಪಿ ಪಾತಿದೋಣಿ" ಮತ್ತು ಜೀವರಕ್ಷಕ ಸಾಧನಗಳನ್ನು ಉಚಿತವಾಗಿ ನೀಡಲಾಗುವುದು ಹಾಗೂ ಒಳನಾಡು ಭಾಗದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀನುಗಾರರಿಗೆ ಮೀನು ಸಲಕರಣೆ ಕಿಟ್ಟುಗಳನ್ನು ಉಚಿತವಾಗಿ ನೀಡಲಾಗುವುದು |
| 5 | ಜಿಲ್ಲಾ ವಲಯ: ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ | 184.00 | 97.00 | 281.00 | 184.00 | 97.00 | 281.00 | 1.ಮೀನು ಸಾಕಾಣಿಕೆ ಕೊಳಗಳ ನಿರ್ಮಾಣಕ್ಕಾಗಿ ಘಟಕ ವೆಚ್ಚ ಪ್ರತಿ ಹೆಕ್ಟೇರ್ ಗೆ ರೂ 7.00 ಲಕ್ಷಗಳಿಗೆ ಶೇ.60 ರಷ್ಟು ಹಾಗೂ ಹೂಡಿಕೆ ವೆಚ್ಚ ರೂ 4.00 ಲಕ್ಷಗಳಲ್ಲಿ ಶೇ 60 ರಷ್ಟು ಸಹಾಯಧನ ನೀಡಲಾಗುವುದು. ಕೊಳದ ವಿಸ್ತೀರ್ಣ ಕನಿಷ್ಠ ಅರ್ಧ ಎಕರೆ ಆಗಿರಬೇಕು.<br>2. ಬಾವಿ ಮತ್ತು ಹೊಂಡಗಳಲ್ಲಿ ಉಚಿತ ಮೀನುಮರಿ ಸರಬರಾಜು(100%) ಮಾಡಲಾಗುವುದು.<br>3.ಮೀನುಮರಿ ಬಿತ್ತನೆಗೆ ರೂ.5000 ಗಳ ವರೆಗೆ 100% ರಷ್ಟು ಸಹಾಯಧನ ನೀಡಲಾಗುವುದು.<br>4.ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ 10,000 ಗಳ ವರೆಗೆ ಉಚಿತವಾಗಿ ನೀಡುವುದು (100%), ಇವುಗಳಿಗೆ ಸದರಿ ಜಿಲ್ಲೆಗಳಿಗೆ ಒದಗಿಸಿದ ಅನುದಾನಕ್ಕೆ ಅನುಗುಣವಾಗಿ ನೀಡಲು ಉದ್ದೇಶಿಸಲಾಗಿದೆ. |
| | ಒಟ್ಟು | **1116.36** | **430.02** | **1546.38** | **1949.36** | **1764.02** | **3713.38** | |

* * * * *

Director of Fisheries
Bangalore

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಶಾಂತಾರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:- 727 ರ.

**ಅನುಬಂಧ-02**

## ರಾಜ್ಯದಲ್ಲಿನ ಮೀನುಗಾರಿಕೆ ಇಲಾಖೆಯಲ್ಲಿ ಮೀನುಗಾರರಿಗಾಗಿ 2024-25ನೇ ಸಾಲಿನಲ್ಲಿ ಜಾರಿಯಲ್ಲಿರುವ ಯೋಜನೆಗಳ ಮಾಹಿತಿ

### 1. ಸಮಗ್ರಮೀನುಗಾರಿಕೆ ಅಭಿವೃದ್ಧಿಕಾರ್ಯಕ್ರಮಗಳು :

ಹಿಂದಿನ ಸಾಲಿನ ವರೆಗೆ ಪ್ರತ್ಯೇಕ ಲೆಕ್ಕ ಶೀರ್ಷಿಕೆಗಳಡಿ ಅನುಷ್ಠಾನಗೊಳಿಸಲಾಗುತ್ತಿದ್ದ 5 ಯೋಜನೆಗಳನ್ನು 2023-24ನೇ ಸಾಲಿನಿಂದ ಒಂದೇ ಲೆಕ್ಕ ಶೀರ್ಷಿಕೆಯಡಿ (2405-00-101-0-03) ವಿಲೀನಗೊಳಿಸಿ ಅನುಷ್ಠಾನಗೊಳಿಸಲಾಗುತ್ತಿದೆ.

### 1.1 ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ

a. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನುಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ.

b. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನು ಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/- ಕ್ಕೆಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನುಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ. 50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

c. ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇ ರ್ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟುಸಹಾಯಧನ ನೀಡಲಾಗುವುದು.

d. ಕೆರೆ/ಜಲಾಶಯದ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿಗಳನ್ನು ಸಾಕಾಣಿಕೆ ಮಾಡಲು ಪ್ರತಿ ಹೆಕ್ಟರ್ ಗೆ ರೂ.2.50 ಲಕ್ಷ ಸಹಾಯಧನ ನೀಡಲಾಗುವುದು.

e. ಮೀನಿನ ಮರಿ ಉತ್ಪಾದನೆಯನ್ನು ಹೆಚ್ಚಿಸುವ ಒಂದು ತಂತ್ರವೆಂದರೆ ಮೀನು ಉತ್ಪಾದನೆ/ಸಾಕಣೆ ಕೇಂದ್ರಗಳಲ್ಲಿ ಸೌಲಭ್ಯಗಳ ಉನ್ನತೀಕರಣ (ಆಧುನೀಕರಣ) ಮೂಲಕ ಅಸ್ತಿತ್ವದಲ್ಲಿರುವ ಮೀನು ಸಾಕಣೆ ಸಾಮರ್ಥ್ಯದ ಬಳಕೆಯನ್ನು ಹೆಚ್ಚಿಸುವುದು. ಈ ನಿಟ್ಟಿನಲ್ಲಿ ಮೀನುಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣವನ್ನು ಇದೇ ಲೆಕ್ಕಶೀರ್ಷಿಕೆಯಡಿ ಕೈಗೊಳ್ಳಲಾಗುತ್ತಿದೆ.

f. ರಾಜ್ಯದ ಆಯ್ದ ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಪ್ರತಿ ಕೆರೆಯ ಜಲವಿಸ್ತೀರ್ಣಕ್ಕೆ ಅನುಗುಣವಾಗಿ ರೂ.10000/- ಮೌಲ್ಯದ ಮೀನುಮರಿಗಳನ್ನು ಉಚಿತವಾಗಿ ದಾಸ್ತಾನು ಮಾಡಿ ಮೀನುಕೃಷಿಯನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ.

### 1.2 ಮೀನುಗಾರಿಕೆ ಸಲಕರಣೆ ಕಿಟ್ಟುಗಳವಿತರಣೆ

a. ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ಟು ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

b. ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್ ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/-ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗುವುದು.

### 1.3 ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ

ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನುಮರಿ ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುತ್ತಿದೆ.

### 1.4 ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.50 ಲಕ್ಷ ಸಹಾಯಧನ ನೀಡಲಾಗುವುದು.

### 1.5 ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು

ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳ ವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ. 2023-24ನೇ ಸಾಲಿನಿಂದ ಸದರಿ ಯೋಜನೆಯಡಿ ಸಾಲದ ಮಿತಿಯನ್ನು ರೂ.50,000/-ಗಳಿಂದ ರೂ.3,00,000/-ಗಳವರೆಗೆ ಹೆಚ್ಚಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

## 2. PMMSY-ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆ (ಕೇಂದ್ರ ಪುರಸ್ಕೃತ ಯೋಜನೆ)

ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೊಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ ಮೂಲಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ, ಮೀನು ಮಾರುಕಟ್ಟೆಗಳು ಮತ್ತು ಮಾರಾಟ ಮೂಲಸೌಕರ್ಯಗಳಿಗೆ ಸಹಾಯಧನ ನೀಡಲಾಗುತ್ತಿದೆ.

ಸದರಿ ಯೋಜನೆಯಡಿ ಸಾಮಾನ್ಯವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ.40 ರಷ್ಟು ಸಹಾಯಧನ ಹಾಗೂ ಮಹಿಳೆಯರು, ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ. 60 ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ.

3. **ಅನುಸೂಚಿತ ಜಾತಿಗಳ ಉಪಯೋಜನೆ ಮತ್ತುಬುಡಕಟ್ಟು ಉಪಯೋಜನೆ ಕಾಯ್ದೆ 2013 ರಡಿಬಳಕೆಯಾಗದೆ ಇರುವ ಮೊತ್ತ**

ಅನುಸೂಚಿತ ಜಾತಿ ಮತ್ತು ಪಂಗಡಕ್ಕೆ ಸೇರಿದ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆ ಕಿಟ್ಟ ಮತ್ತು ಫೈಬರ್ ಗ್ಲಾಸ್ ಹರಿಗೋಲು ವಿತರಣೆಗೆ ಅವಕಾಶ ಮಾಡಲಾಗುತ್ತಿದೆ.

4. **ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು :**

**ಮರಣ ಪ್ರಕರಣ**: ಮೀನುಗಾರಿಕೆಯಲ್ಲಿ ಮತ್ತು ಮೀನುಗಾರಿಕೆ ಸಂಬಂಧಿತ ಚಟುವಟಿಕೆಗಳಲ್ಲಿ ತೊಡಗಿರುವಾಗ ಮರಣಹೊಂದಿದ ಪ್ರಕರಣಗಳಿಗೆ ಹಾಗೂ ಮೀನುಗಾರಿಕೆಯಲ್ಲಿ ತೊಡಗಿದಾಗ ಅನಾರೋಗ್ಯದಿಂದ ಮೃತಪಟ್ಟ ಪ್ರಕರಣಗಳಿಗೆ ರೂ.8.00 ಲಕ್ಷ ಪರಿಹಾರ ನೀಡಲಾಗುವುದು.

**ಅಂಗವಿಕಲತೆ**: ಮೀನುಗಾರಿಕೆಯಲ್ಲಿ ತೊಡಗಿರುವಾಗ ಮತ್ತು ಮೀನುಗಾರಿಕೆ ಸಂಬಂಧಿತ ಚಟುವಟಿಕೆಗಳಲ್ಲಿ ತೊಡಗಿರುವಾಗ ಅಪಘಾತ ಸಂಭವಿಸಿ ಮೀನುಗಾರರು ಶಾಶ್ವತ ಅಂಗವಿಕಲರಾದಲ್ಲಿ ರೂ.4.00 ಲಕ್ಷ ಹಾಗೂ ಭಾಗಶ: ಅಂಗವಿಕಲರಾದಲ್ಲಿ ರೂ.2.00 ಲಕ್ಷ ಪರಿಹಾರ ನೀಡಲಾಗುವುದು.

**ವೈದ್ಯಕೀಯ ವೆಚ್ಚ**: ಮೀನುಗಾರಿಕೆಯಲ್ಲಿ ಅಥವಾ ಮೀನುಗಾರಿಕೆ ಸಂಬಂಧಿತ ಚಟುವಟಿಕೆಗಳಲ್ಲಿ ತೊಡಗಿರುವಾಗ ಅಪಘಾತ ಸಂಭವಿಸಿ ವೈದ್ಯಕೀಯ ಶುಶ್ರೂಷೆಗಾಗಿ ಮಾಡಿತ ವೆಚ್ಚದ ಶೇ.50 ರಷ್ಟು ಅಥವಾ ಗರಿಷ್ಟ ರೂ.3.00 ಲಕ್ಷಗಳ ಮಿತಿಗೊಳಪಟ್ಟು ಪರಿಹಾರ ನೀಡಲಾಗುವುದು.

**ದೋಣಿ/ಬಲೆ/ಮೀನುಗಾರಿಕೆ ಸಲಕರಣೆಗಳ ಸ್ವತ್ತು ಹಾನಿ**: ಪ್ರಾಕೃತಿಕ ವಿಕೋಪದಿಂದಾದ ನಾಡದೋಣಿ/ಮೋಟರೀಕೃತ/ಯಾಂತ್ರೀಕೃತ ದೋಣಿಗಳ ಹಾನಿಗೆ ಹಾಗೂ ಬಲೆ ಇನ್ನಿತರ ಸ್ವತ್ತು ಹಾನಿಗೆ ಅವುಗಳ ಖರೀದಿ/ದುರಸ್ತಿ ಮೌಲ್ಯದ ಶೇ.50 ರಷ್ಟು ಮೌಲ್ಯವನ್ನು ಅಥವಾ ಗರಿಷ್ಟ ರೂ.10.00 ಲಕ್ಷಗಳಿಗೆ ಒಳಪಟ್ಟು ಪರಿಹಾರವಾಗಿ ನೀಡಲಾಗುವುದು.

5. **ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:**

ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆಎಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ. ಕರಾವಳಿಯ 3 ಜಿಲ್ಲೆಗಳ ನಾಡದೋಣಿ ಮೀನುಗಾರರಿಗೆ ರೂ.35/- ರಿಯಾಯತಿ ದರದಲ್ಲಿ ಕೈಗಾರಿಕಾ ಸೀಮೆಎಣ್ಣೆಯನ್ನು ನಿರಂತರವಾಗಿ ಪೂರೈಸಲು ಕ್ರಮ ಕೈಗೊಳ್ಳಲಾಗಿದೆ.

6. **ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟ ತೆರಿಗೆ ಮರುಪಾವತಿ**

2021-22ನೇ ಸಾಲಿನಿಂದ ಯಾಂತ್ರೀಕೃತ ದೋಣಿಗಳಿಗೆ 1.5 ಲಕ್ಷ ಕಿಲೋ ಲೀಟರ್‌ಗೆ ಡೀಸೇಲ್ ಡೇಲೀವರಿ ಪಾಯಿಂಟ್‌ನಲ್ಲಿಯೇ ಕರರಹಿತ ದರದಲ್ಲಿ ವಿತರಿಸಲಾಗುತ್ತಿದೆ.ಪ್ರಸ್ತುತ 2023-24ನೇ ಸಾಲಿನಲ್ಲಿ ಮೀನುಗಾರರ ದೋಣಿಗಳಿಗೆ ನೀಡುತ್ತಿರುವ ಡೀಸೆಲ್ ಮಿತಿಯನ್ನು 1.5 ಲಕ್ಷ ಕಿಲೋ ಲೀಟರ್‌ಗೆ 2.00 ಲಕ್ಷ ಕಿಲೋ ಲೀಟರ್‌ಗೆ ಹೆಚ್ಚಿಸಲಾಗಿದೆ.

7. **ಮತ್ಸ್ಯಾಶ್ರಯ ಯೋಜನೆ:**

ರಾಜ್ಯ ಸರ್ಕಾರವು 2006-07ನೇ ಸಾಲಿನಿಂದ "ಮತ್ಸ್ಯಾಶ್ರಯ ಯೋಜನೆ"ಯನ್ನು ಪ್ರಾರಂಭಿಸಿದ್ದು, ಇದರ ಅಡಿಯಲ್ಲಿ ವಸತಿ ರಹಿತ ಮೀನುಗಾರರು ಅಥವಾ ವಾಸಿಸಲು ಯೋಗ್ಯ ಮನೆ ಇಲ್ಲದ ಮೀನುಗಾರರಿಗೆ ಪ್ರತಿ ವರ್ಷ ಅನುದಾನ ಲಭ್ಯತೆಯ ಆಧಾರದ ಮೇಲೆ ಮನೆಗಳನ್ನು ಹಂಚಿಕೆ ಮಾಡಲಾಗುತ್ತದೆ.

"2024-25 ನೇ ಸಾಲಿನಲ್ಲಿ 10,000 ವಸತಿ ರಹಿತ ಮೀನುಗಾರರಿಗೆ ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಗಳಡಿಯಲ್ಲಿ ಮನೆಗಳನ್ನು ನಿರ್ಮಿಸಲು ಸಹಾಯಧನ ನೀಡಲಾಗುವುದು" ಎಂದು ಪ್ರಸ್ತುತ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿದೆ.

8. **ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)**

**ಅ) ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ**

ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುವುದು.

"ಮತ್ಸ್ಯ ಆಶಾಕಿರಣ ಯೋಜನೆಯಡಿ ಮೀನುಗಾರಿಕೆ ನಿಷೇಧದ ಅವಧಿಯಲ್ಲಿ ಕರಾವಳಿಯ ಮೀನುಗಾರರಿಗೆ ನೀಡುತ್ತಿರುವ ಪರಿಹಾರ ಮೊತ್ತದ ರಾಜ್ಯದ ಪಾಲನ್ನು 1,500 ರೂ. ಗಳಿಂದ 3,000 ರೂ. ಗಳಿಗೆ ಹೆಚ್ಚಿಸಲಾಗುವುದು" ಎಂದು ಪ್ರಸ್ತುತ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿದೆ.

**ಆ) ಸಾಮೂಹಿಕ ವಿಮಾ ಯೋಜನೆ:**

ರಾಜ್ಯದ 80,000 ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.500,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.100,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ಹೈದರಾಬಾದ್‌ನಲ್ಲಿರುವ ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಲಾಗುವುದು.

9. **ಮೀನುಗಾರಿಕೆ ಬಂದರುಗಳ ನಿರ್ಮಾಣ (ಕೇಂದ್ರ ಪುರಸ್ಕೃತ ಯೋಜನೆ)**

ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ ಕೇಂದ್ರ ಸರ್ಕಾರವು ಪ್ರತಿಶತ 50ರಷ್ಟು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50ರಷ್ಟನ್ನು ಭರಿಸುತ್ತದೆ. ಈಗಾಗಲೇ ಮಂಜೂರಾದ ಯೋಜನೆಗಳು 75:25 ಅನುಪಾತದಲ್ಲಿಯೇ ಮುಂದುವರೆಯುತ್ತದೆ.

-5

10. **ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ**

ಮೀನುಗಾರಿಕೆ ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಲೆಕ್ಕ ಶೀರ್ಷಿಕೆಯಡಿ ಪ್ರಗತಿಯಲ್ಲಿರುವ ಕೊಡೇರಿ ಮೀನುಗಾರಿಕೆ ಬಂದರಿನ ಹಾಗೂ ತೆಂಗಿನಗುಂಡಿ ಅಳ್ವೆಕೋಡಿ ಮೀನುಗಾರಿಕೆ ತಂಗುದಾಣದ ಕಾಮಗಾರಿಗಳನ್ನು ಮುಂದುವರಿಸಲು ಹಾಗೂ ಮರವಂತೆ, ಶಿರೂರು-ಅಳ್ವೆಗದ್ದೆ ಮತ್ತು ಕುಂದಾಪುರ ಕೋಡಿಯಲ್ಲಿ ಬಂದರು ಮತ್ತು ತಡೆಗೋಡೆಗಳ ಕಾಮಗಾರಿಗಳನ್ನು ಪ್ರಾರಂಭಿಸಲು ಹಾಗೂ ಭಟ್ಕಳ ಮತ್ತು ಕಾರವಾರ ಮೀನುಗಾರಿಕೆ ಬಂದರುಗಳಲ್ಲಿಯ ಧಕ್ಕೆಗಳನ್ನು ವಿಸ್ತರಿಸಲು ಅನುದಾನ ನೀಡಲಾಗಿದೆ. ಆಮದಳ್ಳಿ ಮೀನುಗಾರಿಕೆ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ಶೇ.75 ರಷ್ಟು ನೆರವಿನೊಂದಿಗೆ ಕೈಗೊಳ್ಳಲಾಗುವುದು.

11. **ಮೀನುಗಾರಿಕೆ ಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ**

ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್‌ನವರ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನು ಮಾರುಕಟ್ಟೆಗಳ ನಿರ್ಮಾಣ, ಮೀನುಮರಿ ಉತ್ಪಾದನಾ ಕೇಂದ್ರಗಳ ಆಧುನೀಕರಣ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ಮಂಜೂರಾದ ಕಾಮಗಾರಿಗಳನ್ನು ಪ್ರಾರಂಭಿಸಲು/ ಮುಂದುವರಿಸಲು ಅನುದಾನ ಒದಗಿಸಲಾಗಿದೆ.

**12. -"ವಿದ್ಯಾನಿಧಿ" ಯೋಜನೆ**

ಕರ್ನಾಟಕ ರಾಜ್ಯದಲ್ಲಿ ಸುಮಾರು 10 ಲಕ್ಷ ಮೀನುಗಾರರಿದ್ದು, ಮೀನುಗಾರರು ಆರ್ಥಿಕವಾಗಿ ಹಿಂದುಳಿದವರಾಗಿರುತ್ತಾರೆ. ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಶಿಷ್ಯವೇತನ (Scholarship) ಯೋಜನೆ-"ವಿದ್ಯಾನಿಧಿ" ಯೋಜನೆಯನ್ನು ಅನುಷ್ಠಾನಗೊಳಿಸ ಲಾಗುತ್ತಿದೆ.

**ಜಿಲ್ಲಾ ಪಂಚಾಯತ್ ಯೋಜನೆಗಳು**

1.**ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ**

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿಕೊಳ ನಿರ್ಮಾಣ ಮಾಡಲು ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,80,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,40,000/- ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿ ಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.10,000/- ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 500 ಸಾಮಾನ್ಯ ಗೆಂಡೆಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನುಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

-6

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

**2. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನುಮಾರಾಟಕ್ಕೆ ಸಹಾಯ**

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.4,000/- ಸಹಾಯಧನವನ್ನು ಹಾಗೂ ದ್ವಿಚಕ್ರವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30000/-ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.1,20,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.2,40,000/- ಗಳ ಸಹಾಯಧನವನ್ನು ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

**3. ಪ್ರದರ್ಶನ ಮತ್ತುತರಬೇತಿ**

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನುಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು.

* * * * *

Director of Fisheries
Bangalore